ಆ) ಪರಿಶೀಲನೆಯಲ್ಲಿದೆ

ಇ) ಪರಿಶೀಲನೆಯಲ್ಲಿರುವುದರಿಂದ ಈ ಪ್ರಶ್ನೆ ಈ ಹಂತದಲ್ಲಿ ಉದ್ಭವಿಸುವುದಿಲ್ಲ

ಈ) ರಾಜ್ಯ ಸರ್ಕಾರ ಪೇಪರ್ ಲಾಟರಿಯನ್ನು ನಿಷೇಧ ಮಾಡಿರುವುದಿಲ್ಲ ಗಣಕೀಕೃತ ನೆಟ್‌ವರ್ಕ್ ಲಾಟರಿಗಳನ್ನು ರಾಜ್ಯ ಸರ್ಕಾರ ನಿಷೇಧ ಮಾಡಿದ್ದರ ಹಿನ್ನೆಲೆಯಲ್ಲಿ ಹೊರ ರಾಜ್ಯದ ಲಾಟರಿ ಏಜೆಂಟರು ಉಚ್ಚ ನ್ಯಾಯಾಲಯದಲ್ಲಿ ಸಲ್ಲಿಸಿರುವ ರಿಟ್ ಅರ್ಜಿಯನ್ನು ಪುರಸ್ಕರಿಸಿ ರಾಜ್ಯ ಸರ್ಕಾರದ ಅಧಿಸೂಚನೆಯನ್ನು ರದ್ದುಪಡಿಸಿದ್ದರ ಹಿನ್ನೆಲೆಯಲ್ಲಿ, ಅದರ ವಿರುದ್ದ ರಾಜ್ಯ ಸರ್ಕಾರ ಸರ್ವೋಚ್ಚ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಿರುತ್ತದೆ

ಉ) ಈ ಪ್ರಶ್ನೆ ಉದ್ಭವಿಸುವುದಿಲ್ಲ

4(70) ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ) ಮಾನ್ಯ ಬೃಹತ್, ಮಧ್ಯಮ, ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) ಮೈಸೂರು ಕಾಗದ ಕಾರ್ಖಾನೆ ಅರಣ್ಯ ವಿಭಾಗದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ,

ಆ) ಇದರಲ್ಲಿ ಖಾಯಂ ಆಗದೇ ದಿನಗೂಲಿ ಅಥವಾ ಸಂಚಿತ ವೇತನ (consolidated pay) ಪಡೆದು ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ,

ಇ) ಖಾಯಂಗೊಳಿಸುವಂತೆ ಈ ನೌಕರರು ಒತ್ತಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

ಈ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದ ನಿಲುವೇನು ?

**ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಬೃಹತ್, ಮಧ್ಯಮ, ಸಣ್ಣ ಕೈಗಾರಿಕಾ ಸಚಿವರು)**

ಅ) 494 ಜನ

ಆ) ಎಲ್ಲಾ 494 ಮಂದಿ ದಿನಗೂಲಿ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ

ಇ) ಬಂದಿದೆ

ಈ) 494 ದಿನಗೂಲಿ ನೌಕರರಲ್ಲದೇ ಕಾರ್ಖಾನೆಯ ಇತರೆ ವಿಭಾಗಗಳಲ್ಲಿ 1520 ಗುತ್ತಿಗೆ ಕಾರ್ಮಿಕರು ಕೆಲಸ ನಿರ್ವಹಿಸುತ್ತಿದ್ದಾರೆ ಕಂಪನಿಯು ಸದ್ಯದಲ್ಲಿ ತೀವ್ರ ಆರ್ಥಿಕ ಮುಗ್ಗಟ್ಟನ್ನು ಎದುರಿಸುತ್ತಿರುವುದರಿಂದ, ಈ ನೌಕರರುಗಳ ಖಾಯಮಾತಿಯ ಕೋರಿಕೆಯನ್ನು ಪರಿಗಣಿಸುವ ಸ್ಥಿತಿಯಲ್ಲಿರುವುದಿಲ್ಲ ಅಲ್ಲದೇ, ಅರಣ್ಯ ವೀಕ್ಷಕರ ಸಂಘವು ಕೈಗಾರಿಕಾ ವಿವಾದವನ್ನು ಸಲ್ಲಿಸಿದ್ದು, ಅದು ನ್ಯಾಯಾಲಯದ ಮುಂದೆ ಬಾಕಿ ಇರುತ್ತದೆ

5(71) ಶ್ರೀ ಬಸವರಾಜು ಎ ಎಸ್ (ಅರಸೀಕೆರೆ) ಮಾನ್ಯ ಯೋಜನಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) ಹಾಸನದ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಪ್ರಗತಿ ಪರಿಶೀಲನಾ ಸಭೆಗಳನ್ನು ನಡೆಸುವುದರ ಸಂಬಂಧದಲ್ಲಿರುವ ಮಾರ್ಗಸೂಚಿಗಳೇನು ,

ಆ) ವಾರದಲ್ಲಿ ಮೂರು ಅಥವಾ ನಾಲ್ಕು ದಿನಗಳನ್ನು ಇಂತಹ ಪ್ರಗತಿ ಪರಿಶೀಲನೆ ಸಭೆಗಳಿಗೆ ಮಾತ್ರವಲ್ಲದೇ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು ನಡೆಸುವ ಸಭೆಗಳಿಗೆ ಜಿಲ್ಲಾ ಮತ್ತು ತಾಲ್ಲೂಕಿನ ಅಧಿಕಾರಿಗಳು ಹಾಜರಾಗುತ್ತಿರುವುದರಿಂದ ಸಾರ್ವಜನಿಕರಿಗೆ ಕೆಲಸ ಕಾರ್ಯಗಳನ್ನು ಸುಗಮವಾಗಿ ನಡೆಯಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

ಇ) ಬಂದಿದ್ದಲ್ಲಿ, ಇಂತಹ ಸಭೆಗಳ ಹಾವಳಿ ತಪ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

**ಶ್ರೀ ರಾಮಚಂದ್ರಗೌಡ (ಯೋಜನಾ ಸಚಿವರು)**

ಅ) ಯೋಜನಾ ಇಲಾಖೆಗೆ ಸಂಬಂಧಿಸಿದಂತೆ ಕೆಡಿಪಿ ಹಾಗೂ ಎಂಎಂಆರ್ ಸಭೆಗಳ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಪ್ರಗತಿ ಪರಿಶೀಲನಾ ಸಭೆಗಳ ಮಾರ್ಗಸೂಚಿಗಳನ್ನು ನೀಡಲಾಗಿದ್ದು, ಅವುಗಳನ್ನು ಒಳಗೊಂಡ ಸರ್ಕಾರಿ ಆದೇಶ ಸಂಖ್ಯೆ ಪಿಡಿ 309 ಪಿಟಿಪಿ 94, ದಿನಾಂಕ 7 8 1995 ಮತ್ತು ಪಿಡಿ 15 ಐಪಿಆರ್ 2005, ದಿನಾಂಕ 26 9 2005ನ್ನು ಅನುಕ್ರಮವಾಗಿ ಅನುಬಂಧ 1 ಮತ್ತು 2 ರಲ್ಲಿ ಲಗತ್ತಿಸಲಾಗಿದೆ

ಆ) ಇಲ್ಲ